1322 (1640) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) :– ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರ ತಾಲ್ಲೂಕಿನ ಗಡಿ ಅಂಚಿನ ಭಾಗದಲ್ಲಿರುವ ಗಿರಿಜನರ ಹಾಡಿ ಹಾಗೂ ಲಂಬಾಣಿ ತಾಂಡಗಳಿಗೆ ಸೇರಿದ ಜಮೀನುಗಳ ಪಹಣಿಯಲ್ಲಿ ಅರಣ್ಯ ಇಲಾಖೆ ಎಂದು ನಮೂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಭಾಗದ ಎಲ್ಲಾ ಗ್ರಾಮಗಳು ದಾಖಲೆ ಗ್ರಾಮಗಳಾಗಿರುವುದರಿಂದ ಅದನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ಯೋಜನೆ ಸರ್ಕಾರಕ್ಕಿದೆಯೇ;

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

ಅ) ಚಾಮರಾಜನಗರದಲ್ಲಿ ಗಿರಿಜನ ಹಾಡಿ ಹಾಗೂ ಲಂಬಾಣಿ ತಾಂಡಗಳಿಗೆ ಸೇರಿದ ಜಮೀನುಗಳ ಪಹಣಿಯಲ್ಲಿ ಅರಣ್ಯ ಇಲಾಖೆ ಎಂದು ನಮೂದಾಗಿರುವುದಿಲ್ಲ.

ಆ) ಇದೆ. ಆದರೆ, ಈಗ ಕೇಂದ್ರ ಸರ್ಕಾರದ ಚುನಾವಣಾ ಆಯೋಗವು ಲೋಕಸಭೆ ಹಾಗೂ ರಾಜ್ಯ ವಿಧಾನಸಭಾ ಕ್ಷೇತ್ರಗಳ ಪುನರ್ ವಿಂಗಡಣಾ ಕಾರ್ಯವು ಪೂರ್ಣಗೊಳ್ಳುವವರೆಗೆ ಆಡಳಿತಾತ್ಮಕ ಘಟಕಗಳಾದ ಜಿಲ್ಲೆ, ತಾಲ್ಲೂಕು, ಹೋಬಳಿ, ಗ್ರಾಮ ಇತ್ಯಾದಿಗಳ ಸ್ಥಾನ/ಜಿಲ್ಲೆಗಳಲ್ಲಿ ಯಾವುದೇ ಬದಲಾವಣೆ ಮಾಡಬಾರದೆಂದು ನಿರ್ಬಂಧ ವಿಧಿಸಿದೆ.

ಈ ನಿರ್ಬಂಧವನ್ನು ಕೇಂದ್ರ ಸರ್ಕಾರವು ಹಿಂದಕ್ಕೆ ಪಡೆದ ನಂತರ ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಇ) (ಆ) ನಲ್ಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

1323 (1641) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) :– ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಬೀಳು ಬಿದ್ದಿರುವ ಸರ್ಕಾರಿ ಜಮೀನುಗಳನ್ನು ರೆಸ್ಟೋರ್ ಮಾಡಲು ಸರ್ಕಾರ ಆಗಿಂದ್ದಾಗೆ (ಕಾಲ–ಕಾಲಕ್ಕೆ) ಆದೇಶವನ್ನು ಹೊರಡಿಸಲಾಗಿದ್ದರೂ ಸಹ

ಈ ಬೀಳು ಜಮೀನುಗಳು ರೆಸ್ಟೋರ್ ಆಗದೇ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

ಇ) ಚಾಮರಾಜನಗರ ಜಿಲ್ಲೆಯಲ್ಲಿ ಎಷ್ಟು ಹೆಕ್ಟೇರ್ ಜಮೀನು ಬೀಳು ಬಿದ್ದಿದೆ;

ಈ) ಸಂತೇಮರಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಹೆಕ್ಟೇರ್ ಜಮೀನು ಬೀಳು ಬಿದ್ದಿದೆ;

ಉ) ಬೀಳು ಭೂಮಿಯನ್ನು ರೆಸ್ಟೋರ್ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

ಅ) ಇಲ್ಲ.

ಆ) ಕರ್ನಾಟಕ ಭೂ ಕಂದಾಯ ನಿಯಮಾವಳಿ 1966ರ ನಿಯಮ 119ರಡಿ ನಿಗದಿತ ಅವಧಿಯೊಳಗಾಗಿ ಬಂದಿರುವ ಅರ್ಜಿಗಳನ್ನು ಪರಿಗಣಿಸಿ ಬೀಳು ಭೂಮಿಯನ್ನು ರೆಸ್ಟೋರ್ ಮಾಡಲಾಗುತ್ತಿದೆ.

ಇ) 552–17 ಹೆಕ್ಟೇರ್

ಈ) 69–80 ಹೆಕ್ಟೇರ್

ಉ) ನಿಗಧಿತ ಅವಧಿಯಲ್ಲಿ ಬೀಳು ರೆಸ್ಟೋರ್ ಮಾಡಲು ಅರ್ಜಿ ಸಲ್ಲಿಸಿದ್ದಲ್ಲಿ ಅದನ್ನು ನಿಯಮಾನುಸಾರ ರೆಸ್ಟೋರ್ ಮಾಡಿಕೊಡಲಾಗುವುದು.

1324 (1642) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ):– ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವೀರಪ್ಪನ್ ಕಾರ್ಯಚರಣೆಯಲ್ಲಿ ಪಾಲ್ಗೊಂಡಿದ್ದ ಅರಣ್ಯ ಇಲಾಖೆಯ ಸಿಬ್ಬಂದಿಗಳು ಯಾರು ಯಾರು (ವಿವರ ನೀಡುವುದು);

ಆ) ಪೊಲೀಸ್ ಸಿಬ್ಬಂದಿಗೆ ನೀಡಿದ ರಿವಾರ್ಡ್‌ನಂತೆಯೇ ಈ ಅರಣ್ಯ ಇಲಾಖೆಯ ಸಿಬ್ಬಂದಿ ವರ್ಗದವರಿಗೆ ನೀಡಲಾಗಿದೆಯೇ;